**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿ.ಸಂಖ್ಯೆ: 876/2020**

**ಪಿರ್ಯಾದಿ** : ಕವಲಂದೆ ಪೊಲೀಸರು

**ವಿರುದ್ಧ**

**ಆರೋಪಿತರು :**
1. ಕುಳ್ಳೇಗೌಡ, ಬಿನ್ ಲೇ. ಕೊಂತೆಗೌಡ, 65 ವರ್ಷ
2. ಶಿವಣ್ಣ, ಬಿನ್ ಕುಳ್ಳೇಗೌಡ, 20 ವರ್ಷ
3. ಲಕ್ಷ್ಮಿ, ಕೋಂ ಕುಳ್ಳೇಗೌಡ, 40 ವರ್ಷ

ವಾಸಃ ಚಿನ್ನದಗುಡಿಹುಂಡಿ ಗ್ರಾಮ, ನಂಜನಗೂಡು ತಾ.

**ದೋಷಾರೋಪಣೆ**

*ಶ್ರೀ ಕಿಶೋರ್ ಕುಮಾರ್ ಎಂ., 1 ನೇ ಹೆಚ್ಚುವರಿ* ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಿ.ಎ. ಎಲ್‌ಎಲ್.ಬಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ದೋಷಾರೋಪಿಸುವುದೇನೆಂದರೆ:-

ದಿನಾಂಕ 11.12.2018 ರಂದು ರಾತ್ರಿ 7.10 ಗಂಟೆ ಸಮಯದಲ್ಲಿ ಕವಲಂದೆ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಚಿನ್ನದಗುಡಿಹುಂಡಿ ಗ್ರಾಮದ ಚಾಸಾ-1 ರವರ ವಾಸದ ಮನೆಯ ಮುಂಭಾಗ ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶ ಹೊಂದಿ ಚಾಸಾ-1 ರವರ ಮನೆಯವರನ್ನು ಉದ್ದೇಶಿಸಿ ಬೋಳಿ ಮಕ್ಕಳೇ, ಸೂಳೇ ಮುಂಡೆ ಹೊರಗೆ ಬಾ ಎಂದು ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ಅವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಶಾಂತಿ ಭಂಗ ಮಾಡಲಿ ಅಥವಾ ಇತರೆ ಯಾವುದೇ ಅಪರಾಧ ಮಾಡಲಿ ಎನ್ನುವ ಉದ್ದೇಶದಿಂದ ಅವರನ್ನು ಅವಮಾನಿಸಿರುತ್ತೀರಿ. ಆದ್ದರಿಂದ ಆರೋಪಿತರಾದ ನೀವು ಭಾರತ ದಂಡ ಸಂಹಿತೆಯ ಕಲಂ 504 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶ ಹೊಂದಿ, ಆ ಪೈಕಿ 2 ನೇ ಆರೋಪಿಯಾದ ನೀವು ಚಾಸಾ-1 ರವರ ಮುಂದಲೆಯನ್ನು ಹಿಡಿದು ಕೆಳಕ್ಕೆ ಕೆಡವಿ ಕೈಯಿಂದ ಮೈಕೈಗೆ ಮತ್ತು 1 ಮತ್ತು 3 ನೇ ಆರೋಪಿತರುಗಳು ಕೈಗಳಿಂದ ಚಾಸಾ-2 ರವರ ಬಲಹಣೆಗೆ ಸ್ವಯಂ ಪ್ರೇರಿತವಾಗಿ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತಾರೆ. ಆದ್ದರಿಂದ ಆರೋಪಿತರಾದ ನೀವುಗಳು ಭಾರತ ದಂಡ ಸಂಹಿತೆಯ ಕಲಂ 324 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶ ಹೊಂದಿ, ಆ ಪೈಕಿ 2 ನೇ ಆರೋಪಿಯಾದ ನೀವು ದೊಣ್ಣೆಯಿಂದ ಚಾಸಾ-1 ರವರ ಎಡತೋಳಿಗೆ ಹಾಗೂ ಎರಡು ಕಡೆಯ ಕುಂಡಿಗಳಿಗೆ ಸ್ವಯಂ ಪ್ರೇರಿತವಾಗಿ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತಾರೆ. ಆದ್ದರಿಂದ ಆರೋಪಿತರಾದ ನೀವುಗಳು ಭಾರತ ದಂಡ ಸಂಹಿತೆಯ ಕಲಂ 324 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ನಾಲ್ಕನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶ ಹೊಂದಿ, ಆ ಪೈಕಿ 1 ಮತ್ತು 3 ನೇ ಆರೋಪಿತರುಗಳು ಚಾಸಾ-2 ರವರನ್ನು ಮುಂದೆ ಹೋಗದಂತೆ ತಡೆದು ಅಕ್ರಮ ತಡೆಯನ್ನುಂಟುಮಾಡಿದ ಕಾರಣ ಭಾರತ ದಂಡ ಸಂಹಿತೆಯ ಕಲಂ 341 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಕೊನೆಯದಾಗಿ, ಅದೇ ದಿನ, ಅದೇ ವೇಳೆ ಮತ್ತು ಅದೇ ಸ್ಥಳದಲ್ಲಿ, ಆರೋಪಿತರಾದ ನೀವು ಅಪರಾಧವನ್ನು ಎಸಗುವ ಸಮಾನ ಉದ್ದೇಶ ಹೊಂದಿ ಚಾಸಾ-1 ರವರಿಗೆ ಕೊಲೆ ಬೆದರಿಕೆ ಹಾಕಿ ಅಪರಾಧಿಕ ಭಯೋತ್ಪಾದನೆಯನ್ನು ಉಂಟು ಮಾಡಿರುತ್ತಾರೆ. ಆದ್ದರಿಂದ ಆರೋಪಿತರಾದ ನೀವುಗಳು ಭಾರತ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಡಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

(ಮೇಲ್ಕಂಡ ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿಗಳು ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 22.02.2023 ರಂದು ತೆರೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.**
**ನಂಜನಗೂಡು**

**1 ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,**
**ನಂಜನಗೂಡು**

**ಸಿ.ಸಿ.ಸಂಖ್ಯೆ: 876/2020 ಪ**

**ಪಿರ್ಯಾದಿ** : ಕವಲಂದೆ ಪೊಲೀಸರು

**ವಿರುದ್ಧ**

**ಆರೋಪಿತರು** :
1. ಬಸವರಾಜಪ್ಪ, ಬಿನ್ ಲೇ. ಚನ್ನಬಸಪ್ಪ, 47 ವರ್ಷ
2. ಪ್ರದೀಪ, ಬಿನ್ ಬಸವರಾಜು ಉ. ರಾಜಪ್ಪ, 25 ವರ್ಷ
3. ಸುಧಾಮಣಿ, ಕೋಂ ರಾಜಶೇಖರ, 37 ವರ್ಷ
4. ವಾಣಿ, ಬಿನ್ ಬಸವರಾಜು ಉ. ರಾಜಪ್ಪ, 23 ವರ್ಷ
ವಾಸಃ ಚೆನ್ನದಗುಡಿಹುಂಡಿ ಗ್ರಾಮ, ನಂಜನಗೂಡು ತಾ.

**ದೋಷಾರೋಪಣೆ**

ಪ್ರಶ್ನೆ*1* : ಮೇಲ್ಕಂಡ ಎಲ್ಲಾ ಆರೋಪಣೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೇ *?*
ಉತ್ತರ :

ಪ್ರಶ್ನೆ2 : ಸದರೀ ಆರೋಪಣೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?
ಉತ್ತರ :

ಮೇಲ್ಕಂಡ ಎಲ್ಲಾ ಆರೋಪಣೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಕೆಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

**ದಿನಾಂಕ:** **1 ನೇ ಹೆ ಸಿ.ಜೆ. ಮತ್ತು ಜೆ.ಎಂ.ಎಫ್.ಸಿ.**
**ನಂಜನಗೂಡು**